ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ: 15ನೇ ಜುಲೈ, 2019

ಇಸ್ರೇಲ್ ಮಾದರಿಯಂತೆ ತೋಟಗಾರಿಕಾ ಬೆಳೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) -

ಡಾ. ವೈ.ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) -

3 (44+45+113) ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಇಸ್ರೇಲ್ ಮಾದರಿಯಂತೆ ತೋಟಗಾರಿಕಾ ಬೆಳೆಗಳನ್ನು ಅಭಿವೃದ್ಧಿಪಡಿಸಲು ಆಯ್ಕೆ ಮಾಡಿಕೊಂಡಿರುವ ಜಿಲ್ಲೆಗಳಾವುವು ;

(ಆ) ಸದರಿ ಜಿಲ್ಲೆಗಳಲ್ಲಿ ಇಸ್ರೇಲ್ ಮಾದರಿ ತೋಟಗಾರಿಕಾ ಬೆಳೆ ಅಭಿವೃದ್ಧಿ ಕಾರ್ಯಗಳು ಯಾವ ಹಂತದಲ್ಲಿವೆ ; ಯಾವ ಕಾಲಮಿತಿಯಲ್ಲಿ ಯೋಜನೆ ಪೂರ್ಣಗೊಳಿಸಲಾಗುವುದು ;

(ಇ) ಸದರಿ ಕಾರ್ಯಗಳಿಗೆ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;2018-19ನೇ ಸಾಲಿನಲ್ಲಿ ಬಿಡುಗಡೆಯಾದ/ಬಳಕೆಯಾದ ಅನುದಾನವೆಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ರಾಜ್ಯದಲ್ಲಿ ಇಸ್ರೇಲ್ ಮಾದರಿ ಕೃಷಿ ಪದ್ಧತಿ ಚಾಲ್ತಿಯಲ್ಲಿದೆಯೇ ; ಯಾವ ಯಾವ ಮಾದರಿಗಳಲ್ಲಿ ತೋಟಗಾರಿಕೆ ಚಟುವಟಿಕೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ; (ಜಿಲ್ಲಾವಾರು, ಬೆಳೆವಾರು ಮಾಹಿತಿ ನೀಡುವುದು)

(ಉ) ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ``ತೋಟಗಾರಿಕಾ ಮೇಳ''ದಲ್ಲಿ ಮಾನ್ಯ ಮುಖ್ಯಮಂತ್ರಿಗಳವರು ನೀಡಿದ ಭರವಸೆಯಂತೆ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳನ್ನು ಸದರಿ ಯೋಜನೆಯ ವ್ಯಾಪ್ತಿಗೆ ಸೇರಿಸಲಾಗಿದೆಯೇ ; ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು ; ಇದಕ್ಕಾಗಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ; (ವಿವರ ನೀಡುವುದು)

(ಊ) ``ತೋಟಗಾರಿಕಾ ಮೇಳ''ದಲ್ಲಿ ಮಾನ್ಯ ಮುಖ್ಯಮಂತ್ರಿಗಳವರು ನೀಡಿದ ಭರವಸೆಯಂತೆ ಘಟಪ್ರಭಾ ನದಿಯಿಂದ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ನೀರನ್ನು ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ಹಾಗೂ ಸದರಿ ಕಾರ್ಯ ಯಾವ ಹಂತದಲ್ಲಿದೆ, ಯಾವ ಕಾಲಮಿತಿಯಲ್ಲಿ ಸದರಿ ಕಾರ್ಯವನ್ನು ಪೂರ್ಣಗೊಳಿಸಲಾಗುವುದು ?